All India Radio: Bangalore
National Bulletin In Kannada
22.06.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ಮಧ್ಯಪ್ರದೇಶದ ಕುನೋ ರಾಷ್ಟ್ರೀಯ ಉದ್ಯಾನವನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ
2. ನವದೆಹಲಿಯಲ್ಲಿ ಇಂದಿನಿಂದ ಬ್ರಿಕ್ಸ್ ರಾಷ್ಟ್ರೀಯ ಭದ್ರತಾ ಸಲಹೆಗಾರರ ಸಭೆ
3. ತಮಿಳುನಾಡು ಅನಿಲ ಸೋರಿಕೆ ದುರಂತ; ಉನ್ನತ ಮಟ್ಟದ ತನಿಖೆಗೆ ಮುಖ್ಯಮಂತ್ರಿ ಸಿ.ವಿಜಯ್ ಜೋಸೆಫ್ ಆದೇಶ
4. ಸ್ವಿಟ್ಜರ್‌ಲ್ಯಾಂಡ್‌ನಲ್ಲಿ ಇರಾನ್-ಅಮೆರಿಕ ನಿಯೋಗ ಮಟ್ಟದ ಮಾತುಕತೆ ಪ್ರಗತಿಯಲ್ಲಿ
5. ಫಿಫಾ ವಿಶ್ವಕಪ್ ಫುಟ್ಬಾಲ್: ಕೇಪ್ ವರ್ಡೆ ಮತ್ತು ಉರುಗ್ವೆ ತಂಡಗಳ ನಡುವಿನ ಪಂದ್ಯ ಡ್ರಾನಲ್ಲಿ ಅಂತ್ಯ

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಮಧ್ಯಪ್ರದೇಶದ ಶಿಯೋಪುರ್ ಜಿಲ್ಲೆಯ ಕುನೋ ರಾಷ್ಟ್ರೀಯ ಉದ್ಯಾನವನಕ್ಕೆ ಭೇಟಿ ನೀಡುಲಿದ್ದಾರೆ. ಚೇತಾ ಮಿತ್ರರು, ಚಿರತೆ ಟ್ರ್ಯಾಕರ್‌ಗಳು, ಸ್ಥಳೀಯ ಅರಣ್ಯ ಸಿಬ್ಬಂದಿ ಮತ್ತು ಪ್ರವಾಸಿ ಮಾರ್ಗದರ್ಶಕರಾಗಿ ಕೆಲಸ ಮಾಡುವ ಸಹರಿಯಾ ಬುಡಕಟ್ಟಿನ ಸದಸ್ಯರೊಂದಿಗೆ ಅವರು ಸಂವಹನ ನಡೆಸಲಿದ್ದಾರೆ. ಭೇಟಿಯ ನಂತರ, ರಾಷ್ಟ್ರಪತಿಗಳು ಶಿಯೋಪುರದಿಂದ ಗ್ವಾಲಿಯರ್‌ಗೆ ತೆರಳಲಿದ್ದಾರೆ ಮತ್ತು ನಂತರ ಭಾರತೀಯ ವಾಯುಪಡೆಯ ವಿಶೇಷ ವಿಮಾನದಲ್ಲಿ ನವದೆಹಲಿಗೆ ಹಿಂತಿರುಗಲಿದ್ದಾರೆ. ನಿನ್ನೆ ಅವರು ಮಧ್ಯಪ್ರದೇಶದ ಜಬಲ್ಪುರ್‌ನಲ್ಲಿರುವ ರಾಣಿ ದುರ್ಗಾವತಿ ವಿಶ್ವವಿದ್ಯಾಲಯದ ೩೬ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ, ವಿವಿಧ ವಿಭಾಗಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿ ಚಿನ್ನದ ಪದಕಗಳನ್ನು ಪ್ರದಾನ ಮಾಡಿದರು. ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ೨೦೪೭ರೊಳಗೆ ವಿಕಸಿತ ಭಾರತ ನಿರ್ಮಾಣದ ಗುರಿ ಸಾಧಿಸಬೇಕಾದರೆ ಅಭಿವೃದ್ಧಿಯ ಫಲಗಳು ಸಮಾಜದ ಪ್ರತಿಯೊಂದು ವರ್ಗ ಹಾಗೂ ಪ್ರತಿಯೊಬ್ಬ ವ್ಯಕ್ತಿಗೂ ತಲುಪಬೇಕು. ಶಿಕ್ಷಣವು ವ್ಯಕ್ತಿ ಹಾಗೂ ಸಮಾಜದ ಅಭಿವೃದ್ಧಿಗೆ ಅತ್ಯಂತ ಪರಿಣಾಮಕಾರಿ ಸಾಧನವಾಗಿದ್ದು, ಆದಿವಾಸಿ

ಸಮುದಾಯಗಳ ಶಿಕ್ಷಣ ಮತ್ತು ಸಮಗ್ರ ಅಭಿವೃದ್ಧಿಗಾಗಿ ನಿರಂತರ ಪ್ರಯತ್ನಗಳು ನಡೆಯಬೇಕು ಎಂದು ಪ್ರತಿಪಾದಿಸಿದರು.

<><><><>

ಭಾರತ ನವದೆಹಲಿಯಲ್ಲಿಂದು ಬ್ರಿಕ್ಸ್ ರಾಷ್ಟ್ರೀಯ ಭದ್ರತಾ ಸಲಹೆಗಾರರ ಎರಡು ದಿನಗಳ ಸಭೆಯನ್ನು ಆಯೋಜಿಸಲಿದೆ. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅಧ್ಯಕ್ಷತೆ ವಹಿಸಲಿದ್ದು, ಈ ಸಭೆಯು ೧೧ ಸದಸ್ಯ ರಾಷ್ಟ್ರಗಳ ಭದ್ರತಾ ಮುಖ್ಯಸ್ಥರು ಭಾಗವಹಿಸಲಿದ್ದಾರೆ. ಇವುಗಳಲ್ಲಿ ಭಾರತ, ಬ್ರೆಜಿಲ್, ಚೀನಾ, ಈಜಿಪ್ಟ್, ಇಥಿಯೋಪಿಯಾ, ಇಂಡೋನೇಷ್ಯಾ, ಇರಾನ್, ರಷ್ಯಾ, ಸೌದಿ ಅರೇಬಿಯಾ, ದಕ್ಷಿಣ ಆಫ್ರಿಕಾ ಮತ್ತು ಯುಎಇ ಗಳು ಸೇರಿವೆ. ಈ ಸಭೆಯು 'ಜಗತ್ತು ಇಂದು ಎದುರಿಸುತ್ತಿರುವ ಭದ್ರತಾ ಸವಾಲುಗಳು' ಎಂಬ ವಿಷಯದ ಮೇಲೆ ಕೇಂದ್ರೀಕರಿಸುತ್ತದೆ. ರಾಷ್ಟ್ರೀಯ ಭದ್ರತಾ ಬೆದರಿಕೆಗಳ ವೇಗವಾಗಿ ವಿಕಸನಗೊಳ್ಳುತ್ತಿರುವ ಸ್ವರೂಪ ಮತ್ತು ಉದಯೋನ್ಮುಖ ಭದ್ರತಾ ಅಪಾಯಗಳಲ್ಲಿ ಹೊಸ ತಂತ್ರಜ್ಞಾನಗಳ ಪಾತ್ರದ ಮೇಲೆ ಚರ್ಚೆಗಳು ಕೇಂದ್ರೀಕೃತವಾಗಿವೆ. ೨೦೨೬ ರಲ್ಲಿ ಭಾರತ ನಾಲ್ಕನೇ ಬಾರಿಗೆ ಬ್ರಿಕ್ಸ್ ಅಧ್ಯಕ್ಷತೆಯನ್ನು ವಹಿಸಿಕೊಂಡಿರುವುದರಿಂದ ಈ ಸಭೆ ನಡೆಯುತ್ತಿದೆ. ಭಾರತದ ಅಧ್ಯಕ್ಷತೆಯು 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ' ಎಂಬ ವಿಷಯದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.

<><><><>

ತಮಿಳುನಾಡಿನ ತಿರುವಳ್ಳೂರು ಜಿಲ್ಲೆಯ ಪೆರಿಯಪಾಳಯಂನಲ್ಲಿರುವ ಸಮುದ್ರ ಆಹಾರ ರಫ್ತು ಕಂಪನಿಯಲ್ಲಿ ಸಂಭವಿಸಿದ ಅಮೋನಿಯಾ ಅನಿಲ ಸೋರಿಕೆಯಿಂದ ಕನಿಷ್ಠ ಏಳು ಮಂದಿ ಮೃತಪಟ್ಟಿದ್ದು, ೭೦ಕ್ಕೂ ಹೆಚ್ಚು ಕಾರ್ಮಿಕರು ಅಸ್ವಸ್ಥರಾಗಿದ್ದಾರೆ. ರಕ್ಷಣಾ ಮತ್ತು ವೈದ್ಯಕೀಯ ಕಾರ್ಯಾಚರಣೆಗಳು ಮುಂದುವರಿದಿರುವುದರಿಂದ ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಹಾಗೂ ರಾಸಾಯನಿಕ, ಜೈವಿಕ ಮತ್ತು ಅಣು ಪ್ರತಿಕ್ರಿಯಾ ತಂಡಗಳು, ರಕ್ಷಣಾ ಕಾರ್ಯಾಚರಣೆ ನಡೆಸಿದ್ದು, ಕಟ್ಟುನಿಟ್ಟಿನ ಸುರಕ್ಷತಾ ಕ್ರಮಗಳೊಂದಿಗೆ ಅನಿಲ ಸೋರಿಕೆಯನ್ನು ನಿಯಂತ್ರಣಕ್ಕೆ ತಂದಿವೆ. ತಮಿಳುನಾಡು ಮುಖ್ಯಮಂತ್ರಿ ಸಿ.ವಿಜಯ್ ಜೋಸೆಫ್ ಘಟನೆಯ ಕುರಿತು ಉನ್ನತ ಮಟ್ಟದ ತನಿಖೆಗೆ ಆದೇಶಿಸಿದ್ದು, ೨೪ ಗಂಟೆಗಳೊಳಗೆ ವರದಿ ಸಲ್ಲಿಸಲು ಮೂವರು ಸದಸ್ಯರ ಸಮಿತಿಯನ್ನು

ರಚಿಸಿದ್ದಾರೆ. ಮೃತರ ಕುಟುಂಬಗಳಿಗೆ ತಲಾ ಎರಡು ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಘಟನೆ ಕುರಿತು ತೀವ್ರ ಸಂತಾಪ ಸೂಚಿದ್ದಾರೆ. ಮೃತರ ಕುಟುಂಬಗಳಿಗೆ ಅವರು ಸಾಂತ್ವನ ಹೇಳಿದ್ದು, ಚಿಕಿತ್ಸೆ ಪಡೆಯುತ್ತಿರುವವರು ಶೀಘ್ರ ಗುಣಮುಖರಾಗಲಿ ಎಂದು ಪ್ರಾರ್ಥಿಸಿದ್ದಾರೆ.

<><><>

ಇರಾನ್‌ನ ಪರಮಾಣು ಕಾರ್ಯಕ್ರಮ ಮತ್ತು ಪ್ರಾದೇಶಿಕ ಭದ್ರತಾ ಸಮಸ್ಯೆಗಳನ್ನು ಪರಿಹರಿಸಲು ಸ್ವಿಟ್ಜರ್‌ಲ್ಯಾಂಡ್‌ನಲ್ಲಿ ಹಿರಿಯ ನಿಯೋಗಗಳು ಸಭೆ ಸೇರಿದ್ದು, ಇರಾನ್‌ನೊಂದಿಗಿನ ಮಾತುಕತೆಗಳು ಪ್ರಗತಿಯಲ್ಲಿವೆ ಎಂದು ಅಮೆರಿಕದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ತಿಳಿಸಿದ್ದಾರೆ. ಲುಸೆರ್ನ್ ಸರೋವರದ ಮೇಲಿರುವ ಬರ್ಗೆನ್‌ಸ್ಟಾಕ್ ರೆಸಾರ್ಟ್‌ನಲ್ಲಿ ಅಮೆರಿಕ ಮತ್ತು ಇರಾನ್‌ನ ನಿಯೋಗಗಳು ಮಾತುಕತೆಗಳನ್ನು ಪ್ರಾರಂಭಿಸಿವೆ. ಸಭೆಗೆ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಜೆ.ಡಿ.ವ್ಯಾನ್ಸ್, ಮಾತುಕತೆಗಳು ಈಗಾಗಲೇ ಸಕಾರಾತ್ಮಕ ಫಲಿತಾಂಶಗಳನ್ನು ನೀಡಿವೆ. ಮಾತುಕತೆಗಳು ಪ್ರಾಥಮಿಕವಾಗಿ ಇರಾನ್‌ನ ಪರಮಾಣು ಕಾರ್ಯಕ್ರಮದ ಮೇಲೆ ಕೇಂದ್ರೀಕೃತವಾಗಿವೆ. ಆದರೂ ಇಸ್ರೇಲ್ ಮತ್ತು ಲೆಬನಾನ್ ನಡುವಿನ ಕದನ ವಿರಾಮವನ್ನು ಕಾಯ್ದುಕೊಳ್ಳುವ ಪ್ರಯತ್ನಗಳು ಸೇರಿದಂತೆ ಪ್ರಾದೇಶಿಕ ಭದ್ರತಾ ಸಮಸ್ಯೆಗಳು ಸಹ ಪ್ರಮುಖವಾಗಿ ಚರ್ಚೆಯಾಗುವ ನಿರೀಕ್ಷೆಯಿದೆ ಎಂದು ಹೇಳಿದ್ದಾರೆ.

<><><>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ ಇಂದಿನಿಂದ ಯುಜಿಸಿ ಎನ್‌ಇಟಿ ಜೂನ್ ೨೦೨೬ ಪರೀಕ್ಷೆಯನ್ನು ಪ್ರಾರಂಭಿಸಲಿದೆ. ರಾಷ್ಟ್ರೀಯ ಮಟ್ಟದ ಅರ್ಹತಾ ಪರೀಕ್ಷೆಯನ್ನು ಈ ತಿಂಗಳ ೩೦ ರವರೆಗೆ ಪ್ರತಿದಿನ ಎರಡು ಪಾಳಿಗಳಲ್ಲಿ ಕಂಪ್ಯೂಟರ್ ಆಧಾರಿತ ಪರೀಕ್ಷೆ ಮಾದರಿಯಲ್ಲಿ ನಡೆಸಲಾಗುತ್ತದೆ. ಜೂನಿಯರ್ ರಿಸರ್ಚ್ ಫೆಲೋಶಿಪ್, ಸಹಾಯಕ ಪ್ರಾಧ್ಯಾಪಕ ಹುದ್ದೆಗಳು ಮತ್ತು ಪಿಎಚ್‌ಡಿ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಬಯಸುವ ಅಭ್ಯರ್ಥಿಗಳಿಗೆ ಯುಜಿಸಿ ಎನ್‌ಇಟಿ ಪರೀಕ್ಷೆಯನ್ನು ನಡೆಸಲಾಗುತ್ತದೆ.

<><><>

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ-ಸಿಬಿಎಸ್‌ಇ ೧೨ನೇ ತರಗತಿ ಪರೀಕ್ಷೆಯ ಉತ್ತರಪತ್ರಿಕೆ ಪರಿಶೀಲನೆ ಮತ್ತು ಮರುಮೌಲ್ಯಮಾಪನ ಫಲಿತಾಂಶಗಳನ್ನು ಪ್ರಕಟಿಸಲು ಆರಂಭಿಸಿದೆ. ಒಟ್ಟು

ಸ್ವೀಕರಿಸಲಾದ ಅರ್ಜಿಗಳ ಪೈಕಿ ಶೇಕಡಾ ೮೭ಕ್ಕೂ ಹೆಚ್ಚು ಅರ್ಜಿಗಳ ಫಲಿತಾಂಶಗಳನ್ನು ಪ್ರಕಟಿಸಲಾಗಿದೆ. ಉಳಿದ ಫಲಿತಾಂಶಗಳನ್ನು ಹಂತ ಹಂತವಾಗಿ ಬಿಡುಗಡೆ ಮಾಡಲಾಗುತ್ತಿದ್ದು, ಸಂಪೂರ್ಣ ಪ್ರಕ್ರಿಯೆ ಶೀಘ್ರದಲ್ಲೇ ಪೂರ್ಣಗೊಳ್ಳುವ ನಿರೀಕ್ಷೆಯಿದೆ ಎಂದು ಸಿಬಿಎಸ್‌ಇ ತಿಳಿಸಿದೆ. ವದಂತಿಗಳು ಅಥವಾ ಪರಿಶೀಲಿಸದ ಸಾಮಾಜಿಕ ಜಾಲತಾಣದ ಮಾಹಿತಿಗಳನ್ನು ನಂಬದೆ, ಅಧಿಕೃತ ಪ್ರಕಟಣೆಗಳನ್ನಷ್ಟೇ ಅವಲಂಬಿಸುವಂತೆ ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ಸಿಬಿಎಸ್‌ಇ ಮನವಿ ಮಾಡಿದೆ.

<><><>

೨೦೨೬ ರ ಫಿಫಾ ವಿಶ್ವಕಪ್ ಪುಟ್ಬಾಲ್‌ನಲ್ಲಿ, ಇಂದು ಫ್ಲೋರಿಡಾದಲ್ಲಿ ನಡೆದ ಕೇಪ್ ವರ್ಡೆ ಮತ್ತು ಉರುಗ್ವೆ ತಂಡಗಳ ನಡುವಿನ 'ಎಚ್' ಗುಂಪಿನ ಪಂದ್ಯ ೨-೨ ಗೋಲುಗಳಿಂದ ಡ್ರಾ ನಲ್ಲಿ ಕೊನೆಗೊಂಡಿತು. ೨೧ನೇ ನಿಮಿಷದಲ್ಲಿ ಕೆವಿನ್ ಪಿನಾ ಅದ್ಭುತ ನೇರ ಫ್ರೀ ಕಿಕ್ ಗಳಿಸುವ ಮೂಲಕ ಕೇಪ್ ವರ್ಡೆ ತಂಡ ಮುನ್ನಡೆ ಸಾಧಿಸಿತು. ಮ್ಯಾಕ್ಸಿ ಅರೌಜೊ ಮತ್ತು ಅಗಸ್ಟಿನ್ ಕ್ಯಾನೊಬಿಯೊ ಅವರ ಎರಡು ಗೋಲುಗಳೊಂದಿಗೆ ಉರುಗ್ವೆ ತಂಡ ಪ್ರಾಬಲ್ಯ ಸಾಧಿಸಿತು. ಆದಾಗ್ಯೂ, ಕೇಪ್ ವರ್ಡೆ ತಂಡದ ಪರ ಹೆಲ್ಡರ್ ವಾರೆಲಾ ಅವರ ಗೋಲಿನಿಂದ ಪಂದ್ಯ ೨-೨ ಅಂತರದಲ್ಲಿ ಡ್ರಾ ಕಂಡಿತು. 'ಎಚ್' ಗುಂಪಿನ ಪಂದ್ಯಗಳ ಅಂತಿಮ ಸುತ್ತಿಗೆ ಪ್ರವೇಶಿಸಲು ಎರಡೂ ತಂಡಗಳು ತಲಾ ಎರಡು ಅಂಕಗಳು ಪಡೆದವು. ಇದಕ್ಕೂ ಮೊದಲು, ನಿನ್ನೆ ರಾತ್ರಿ ಕ್ಯಾಲಿಫೋರ್ನಿಯಾದಲ್ಲಿ ನಡೆದ ಇರಾನ್ ಮತ್ತು ಬೆಲ್ಜಿಯಂ ನಡುವಿನ 'ಜಿ' ಗುಂಪಿನ ಪಂದ್ಯ ಗೋಲುರಹಿತ ಡ್ರಾ ನಲ್ಲಿ ಅಂತ್ಯಗೊಂಡಿತು. ಅಟ್ಲಾಂಟಾದಲ್ಲಿ ನಡೆದ 'ಎಚ್' ಗುಂಪಿನ ಮತ್ತೊಂದು ಪಂದ್ಯದಲ್ಲಿ ಸೌದಿ ಅರೇಬಿಯಾ ವಿರುದ್ಧ ४-೦ ಅಂತರದ ಭರ್ಜರಿ ಜಯ ಸಾಧಿಸುವ ಮೂಲಕ ಸ್ಪೇನ್ ಮುಂದಿನ ಸುತ್ತಿಗೆ ಅರ್ಹತೆ ಪಡೆದುಕೊಂಡಿತು. ನ್ಯೂಜಿಲೆಂಡ್ ಮತ್ತು ಈಜಿಪ್ಟ್ ತಂಡಗಳ ನಡುವೆ ಇಂದು ನಡೆಯುತ್ತಿರುವ 'ಜಿ' ಗುಂಪಿನ ಪಂದ್ಯ ಪ್ರಗತಿಯಲ್ಲಿದೆ. ಅರ್ಜೆಂಟೀನಾ ಮತ್ತು ಆಸ್ಟ್ರಿಯಾ ನಡುವಿನ 'ಜೆ' ಗುಂಪಿನ ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦:೩೦ ಕ್ಕೆ ಆರಂಭವಾಗಲಿದೆ.

<><><>

ಮ್ಯಾಂಚೆಸ್ಟರ್‌ನಲ್ಲಿ ನಿನ್ನೆ ರಾತ್ರಿ ನಡೆದ ಐಸಿಸಿ ಮಹಿಳೆಯರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ 'ಎ' ಗುಂಪಿನ ಪಂದ್ಯದಲ್ಲಿ ಮಾರಿಜಾನ್ ಕಾಪ್ ಅವರ ಅಜೇಯ ೮೧ ರನ್‌ಗಳ ನೆರವಿನಿಂದ ದಕ್ಷಿಣ ಆಫ್ರಿಕಾ ತಂಡ, ಭಾರತವನ್ನು ೬ ವಿಕೆಟ್‌ಗಳಿಂದ ಸೋಲಿಸಿತು. ಭಾರತ

ನೀಡಿದ್ದ ೧೫೯ ರನ್‌ಗಳ ಗುರಿ ಬೆನ್ನಟ್ಟಿದ ದಕ್ಷಿಣ ಆಫ್ರಿಕಾ ತಂಡ, ೧೯.೧ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೬೧ ರನ್ ಗಳಿಸಿ ಜಯ ಸಾಧಿಸಿತು. ಟಾಜ್ಮಿನ್ ಬ್ರಿಟ್ಸ್ ೪೦ ರನ್‌ಗಳ ಕೊಡುಗೆ ನೀಡಿದರು. ಭಾರತದ ಪರ ಶ್ರೀ ಚರಣಿ ೩ ವಿಕೆಟ್ ಕಬಳಿಸಿದರು. ಇದಕ್ಕೂ ಮೊದಲು ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೫೮ ರನ್ ಗಳಿಸಿತು. ಶಫಾಲಿ ವರ್ಮಾ ೩೧ ರನ್ ಗಳಿಸಿದರು. ದಕ್ಷಿಣ ಆಫ್ರಿಕಾ ಪರ ಮಾರಿಜಾನ್ ಕಾಪ್ ಮತ್ತು ಶಬ್ನಿಮ್ ಇಸ್ಮಾಯಿಲ್ ತಲಾ ೨ ವಿಕೆಟ್ ಪಡೆದರು. ಆಲ್‌ರೌಂಡ್ ಪ್ರದರ್ಶನ ನೀಡಿದ ಮಾರಿಜಾನ್ ಕಾಪ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

<><><>

ಚೀನಾದ ಶಾಕ್ಸಿಂಗ್ ನಗರದಲ್ಲಿ ನಡೆದ ಏಷ್ಯನ್ ರಿಲೇಸ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಮಹಿಳೆಯರ ೪x೧೦೦ ಮೀಟರ್ ರಿಲೇ ಸ್ಪರ್ಧೆಯಲ್ಲಿ ಭಾರತ ಚಿನ್ನದ ಪದಕ ಗೆದ್ದಿದೆ. ಶ್ರಾಬನಿ ನಂದಾ, ಎಸ್.ಎಸ್.ಸ್ನೇಹಾ, ಸುದೇಶ್ನಾ ಶಿವಂಕರ್ ಹಾಗೂ ತಮನ್ನಾ ಒಳಗೊಂಡ ಭಾರತೀಯ ತಂಡ ೪೩.೮೫ ಸೆಕೆಂಡುಗಳಲ್ಲಿ ಗುರಿ ತಲುಪಿ ಮೂಲಕ ಅತ್ಯುತ್ತಮ ಸಾಧನೆ ದಾಖಲಿಸಿತು. ಮಿಶ್ರ ೪x೧೦೦ಮೀಟರ್ ರಿಲೇ ಸ್ಪರ್ಧೆಯಲ್ಲಿ ತೀರ್ಥೇಶ್ ಶೆಟ್ಟಿ, ಪೂವಮ್ಮ, ಭರತ್ ಶ್ರೀಧರ್ ಹಾಗೂ ನೀರು ಪಾಠಕ್ ಒಳಗೊಂಡ ಭಾರತೀಯ ತಂಡ, ೩ ನಿಮಿಷ ೧೭ ಸೆಕೆಂಡುಗಳಲ್ಲಿ ಗುರಿ ತಲುಪಿ ಬೆಳ್ಳಿ ಪದಕ ಗೆದ್ದಿತು. ಇದಕ್ಕೂ ಮೊದಲು ನಡೆದ ಮಿಶ್ರ ೪x೧೦೦ಮೀಟರ್ ರಿಲೇ ಸ್ಪರ್ಧೆಯಲ್ಲಿ ಪ್ರಣವ್ ಗೌರವ್, ತಮನ್ನಾ, ಅನಿಮೇಶ್ ಕುಜೂರ್ ಹಾಗೂ ಎಸ್.ಎಸ್.ಸ್ನೇಹಾ ಒಳಗೊಂಡ ಭಾರತೀಯ ತಂಡ ಕಂಚಿನ ಪದಕವನ್ನು ತನ್ನದಾಗಿಸಿಕೊಂಡಿತು.

<><><>

ಜೆಕಿಯಾ ದೇಶದಲ್ಲಿ ನಡೆದ ೫೬ನೇ ಉಸ್ತಿ ನಾಡ್ ಲಾಬೆಮ್ ಆಹ್ವಾನಿತ ಬಾಕ್ಸಿಂಗ್ ಪಂದ್ಯಾವಳಿಯಲ್ಲಿ ಭಾರತದ ಬಾಕ್ಸರ್‌ಗಳು ಎಂಟು ಚಿನ್ನ ಸೇರಿದಂತೆ ಒಟ್ಟು ೧೨ ಪದಕಗಳನ್ನು ಗೆದ್ದು ಗಮನಾರ್ಹ ಸಾಧನೆ ಮಾಡಿದ್ದಾರೆ. ಮಹಿಳಾ ವಿಭಾಗದಲ್ಲಿ ೭೫ ಕೆ.ಜಿ. ವಿಭಾಗದಲ್ಲಿ ಲವ್ಲಿನಾ ಬೊರ್ಗೊಹೈನ್, ೫೪ ಕೆ.ಜಿ. ವಿಭಾಗದಲ್ಲಿ ಪ್ರೀತಿ ಪವಾರ್, ೫೧ ಕೆ.ಜಿ. ವಿಭಾಗದಲ್ಲಿ ಸಾಕ್ಷಿ ಚೌಧರಿ ಹಾಗೂ ೬೦ ಕೆ.ಜಿ. ವಿಭಾಗದಲ್ಲಿ ಪ್ರಿಯಾ ಘಂಘಾಸ್ ಚಿನ್ನದ ಪದಕಗಳನ್ನು ಗೆದ್ದರು. ೬೫ ಕೆ.ಜಿ. ವಿಭಾಗದಲ್ಲಿ ಪರ್ವೀನ್ ಹೂಡಾ ಬೆಳ್ಳಿ ಪದಕಕ್ಕೆ ಪಾತ್ರರಾದರು. ಪುರುಷರ ವಿಭಾಗದಲ್ಲಿ ೫೫ ಕೆ.ಜಿ. ವಿಭಾಗದಲ್ಲಿ ಜದುಮಣಿ ಸಿಂಗ್, ೬೦ ಕೆ.ಜಿ. ವಿಭಾಗದಲ್ಲಿ ಸಚಿನ್, ೮೦ ಕೆ.ಜಿ. ವಿಭಾಗದಲ್ಲಿ

ಅಂಕುಶ್ ಹಾಗೂ ೯೦ ಕೆ.ಜಿಗಿಂತ ಹೆಚ್ಚಿನ ವಿಭಾಗದಲ್ಲಿ ನರೇಂದರ್ ಚಿನ್ನದ ಪದಕಗಳನ್ನು ತಮ್ಮದಾಗಿಸಿಕೊಂಡರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>